# ಕರ್ನಾಟಕ ವಿಧಾನ ಪರಿಷತ್ತು

| | |
|---|---|
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | **176** |
| ಮಾನ್ಯ ಸದಸ್ಯರ ಹೆಸರು | ಶ್ರೀ ಶಶೀಲ್ ಜಿ.ನಮೋಶಿ (ಶಿಕ್ಷಕರ ಕ್ಷೇತ್ರ) |
| ಉತ್ತರಿಸುವ ಸಚಿವರು | ಮಾನ್ಯ ಮುಖ್ಯಮಂತ್ರಿಗಳು |
| ಉತ್ತರಿಸಬೇಕಾಗಿದ್ದ ದಿನಾಂಕ | 13.09.2022 |

| ಕ್ರ.ಸಂ | ಪ್ರಶ್ನೆ | ಉತ್ತರ |
|---|---|---|
| ಅ) | ರಾಜ್ಯ ಸರ್ಕಾರದ ವ್ಯಾಪ್ತಿಯಲ್ಲಿ ವಿವಿಧ ಇಲಾಖೆಗಳ ಅಡಿಯಲ್ಲಿ ಬರುವ ಒಟ್ಟು ನಿಗಮ/ಮಂಡಳಿಗಳ ಸಂಖ್ಯೆ ಎಷ್ಟು; | ರಾಜ್ಯದಲ್ಲಿ ಒಟ್ಟು 125 ಸಾರ್ವಜನಿಕ ಉದ್ದಿಮೆಗಳಿವೆ. |
| ಆ) | ಸದರಿ ನಿಗಮ/ಮಂಡಳಿಗಳಲ್ಲಿ ಲಾಭ ಮತ್ತು ನಷ್ಟದಲ್ಲಿರುವ ನಿಗಮ ಮಂಡಳಿಗಳ ಸಂಖ್ಯೆ ಎಷ್ಟು; | ಈ ಉದ್ದಿಮೆಗಳ ಪೈಕಿ 36 ಉದ್ದಿಮೆಗಳು ಲಾಭದಾಯಕವಾಗಿ ನಡೆಯುತ್ತಿವೆ ಹಾಗೂ 31 ಉದ್ದಿಮೆಗಳು ನಷ್ಟದಲ್ಲಿ ಕಾರ್ಯನಿರ್ವಹಿಸುತ್ತಿದೆ. ಉಳಿದ 58 ಉದ್ದಿಮೆಗಳ ಪೈಕಿ ಸಾಮಾಜಿಕ ವಲಯ, ಮೂಲಭೂತ ಸೌಕರ್ಯ ವಲಯಗಳಂತಹ ಮತ್ತು ಸರ್ಕಾರದ ಮೇಲೆ ಅವಲಂಬಿತ ಕಂಪನಿಗಳು ಹಾಗೂ ಸ್ಥಗಿತಗೊಂಡಿರುವ/ಮುಚ್ಚುವ ಹಂತದಲ್ಲಿರುವ ಉದ್ದಿಮೆಗಳನ್ನು ಒಳಗೊಂಡಿವೆ. |
| ಇ) | ಒಂದೇ ಇಲಾಖೆಯಲ್ಲಿ ಕಾರ್ಯನಿರ್ವಹಿಸುತ್ತಿರುವ 2-3 ನಿಗಮ ಮಂಡಳಿಗಳನ್ನು ವಿಲೀನಗೊಳಿಸುವ ಯೋಜನೆ ಸರ್ಕಾರದ ಮುಂದಿದೆಯೇ; | ಒಂದೇ ಇಲಾಖೆಯಲ್ಲಿ ಕಾರ್ಯನಿರ್ವಹಿಸುತ್ತಿರುವ 2-3 ನಿಗಮ ಮಂಡಳಿಗಳನ್ನು ವಿಲೀನಗೊಳಿಸುವ ಯೋಜನೆ ಪ್ರಸ್ತುತದಲ್ಲಿ ಸರ್ಕಾರದ ಮುಂದಿರುವುದಿಲ್ಲ. |
| ಈ) | ನಿಗಮ/ಮಂಡಳಿಗಳನ್ನು ವಿಲೀನಗೊಳಿಸುವುದರಿಂದ ಸಿಬ್ಬಂದಿಗಳ ಕೊರತೆ ಮತ್ತು ಸರ್ಕಾರದ ಬೊಕ್ಕಸಕ್ಕೆ ಆರ್ಥಿಕ ಹೊರೆಯು ಕಡಿಮೆಯಾಗುವುದಿಲ್ಲವೇ; ಈ ಕುರಿತು ಸರ್ಕಾರ ಕೈಗೊಂಡಿರುವ ಕ್ರಮಗಳೇನು? | ಉತ್ಪಾದನೆ, ಮೂಲಭೂತ ಸೌಕರ್ಯ ಹಾಗೂ ಸಾಮಾಜಿಕ ಸೇವೆ/ವಲಯ ಮುಂತಾದ ಬೇರೆ ಬೇರೆ ಉದ್ದೇಶಗಳನ್ನು ಸಾರ್ವಜನಿಕ ಉದ್ದಿಮೆಗಳು ಹೊಂದಿರುವುದರಿಂದ ಆರ್ಥಿಕ ಹೊರೆ ಕಡಿಮೆಮಾಡಿಕೊಳ್ಳುವ ಉದ್ದೇಶದಿಂದ ಇವುಗಳನ್ನು ವಿಲೀನಗೊಳಿಸುವ ಉದ್ದೇಶ ಸರ್ಕಾರದ ಮುಂದೆ ಇರುವುದಿಲ್ಲ. |

**ಆಇ 77 ಐಎನ್‌ವಿ 2022**

(ಸಿದ್ದರಾಮಯ್ಯ)
ಮುಖ್ಯಮಂತ್ರಿ.